ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1194/2024</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶ್ರೀರಾಮ್ | ಪಿ.ಡಬ್ಲ್ಯೂ.3 |
| ತಂದೆಯ ಹೆಸರು | : | ಸತೀಶ್ | ಸಿ.ಡಬ್ಲ್ಯೂ.5 |
| ವಯಸ್ಸು | : | 22 ವರ್ಷ | |
| ವೃತ್ತಿ | : | ವಿದ್ಯಾರ್ಥಿ | |
| ವಾಸ | : | ಚಿಕ್ಕಮಗಳೂರು | |

<u>ದಿನಾಂಕಃ 06-07-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿತರ ಪರಿಚಯವಿಲ್ಲ. ಚಾಸಾ-1, 2 ಮತ್ತು 3 ರವರ ಪರಿಚಯವಿಲ್ಲ. ಚಾಸಾ-4 ರವರು ಗೊತ್ತು. ನನಗೆ ಈ ಕೇಸಿನ ಬಗ್ಗೆ ಏನೂ ಗೊತ್ತಿಲ್ಲ. ನಾನು ಯಾವುದೇ ಗಲಾಟೆಯನ್ನು ಕಣ್ಣಾರೆ ನೋಡಿರುವುದಿಲ್ಲ. ಈ ದಿನ ನ್ಯಾಯಾಲಯದ ಮುಂದೆ ಇರುವ ಟಬ್ ಹಾಗೂ ಚೇರ್ ಅನ್ನು ಈ ಹಿಂದೆ ನೋಡಿರುವುದಿಲ್ಲ. ನಾನು ತನಿಖಾಧಿಕಾರಿಯವರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

C.C.No.1194/2024
PW-3 CW-5

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ01.02.2024 ರಂದು ನಾನು ತನಿಖಾಧಿಕಾರಿಯವರ ಮುಂದೆ ಈಗ ಓದಿ ಹೇಳಿದಂತೆ 'ನಾನು ಚಿಕ್ಕಮಗಳೂರಿನ ಎ.ಐ.ಟಿ ಕಾಲೇಜಿನಲ್ಲಿ ಪ್ರಥಮ ವರ್ಷದ ---- ಪುನಃ ನೋಡಿದರೆ ಗುರುತಿಸುತ್ತೇನೆ' ಎಂದು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಷಯಗಳು ಗೊತ್ತಿದ್ದರೂ ಕೂಡಾ ಆರೋಪಿತರಿಗೆ ಸಹಾಯ ಮಾಡಬೇಕೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ-</u>

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
(ಕುಮಾರಿ ಸುಜಾತ)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್‌ಆರ್ಃ